# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 205(277) |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಕಿಶೋರ್ ಕುಮಾರ್ ಪುತ್ತೂರು<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 06-03-2025 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕೆ.ಪಿ.ಎಸ್.ಸಿ.,ಯಲ್ಲಿ ಹಲವು ಬಾರಿ ಕನ್ನಡ ಅನುವಾದದಲ್ಲಿ ತಪ್ಪಾದಾಗ ರಚಿಸಿರುವ ಸಮಿತಿಯು ಸಂಪೂರ್ಣ ವರದಿಯನ್ನು ನೀಡಿದೆಯೇ; ನೀಡಿದಲ್ಲಿ ವರದಿಯ ಪ್ರತಿಯನ್ನು ನೀಡುವುದು ಈ ಸಮಿತಿಯು ಮಾಡಿರುವ ಶಿಫಾರಸ್ಸುಗಳೇನು; (ವಿವರ ನೀಡುವುದು) | ಕರ್ನಾಟಕ ಲೋಕಸೇವಾ ಆಯೋಗದಿಂದ 2023-24ನೇ ಸಾಲಿನ 384 – ಗೆಜೆಟೆಡ್ ಪ್ರೊಬೆಷನರ್ಸ್ ಹುದ್ದೆಗಳ ನೇಮಕಾತಿಗಾಗಿ ದಿನಾಂಕ:27-08-2024ರಂದು ಪೂರ್ವಭಾವಿ ಪರೀಕ್ಷೆಯನ್ನು ನಡೆಸಲಾಗಿದ್ದು, ಸದರಿ ಪರೀಕ್ಷೆಯ ಎರಡೂ ಪತ್ರಿಕೆಗಳ ಪ್ರಶ್ನೆಪತ್ರಿಕೆಯಲ್ಲಿ ಪ್ರಶ್ನೆಗಳ ಭಾಷಾಂತರದಲ್ಲಿ ಲೋಪವುಂಟಾಗಿರುವ ಬಗ್ಗೆ ವಿಷಯ ತಜ್ಞರುಗಳಿಂದ ಪ್ರಶ್ನೆಗಳ ಭಾಷಾಂತರವನ್ನು ಪರಿಶೀಲಿಸಿ, ಭಾಷಾಂತರದ ಲೋಪದಿಂದಾಗಿ ಪತ್ರಿಕೆ-1ರಲ್ಲಿ 05 ಪ್ರಶ್ನೆಗಳಿಗೆ ಹಾಗೂ ಪತ್ರಿಕೆ-2ರಲ್ಲಿನ 05 ಪ್ರಶ್ನೆಗಳ ಕೀ-ಉತ್ತರಗಳಲ್ಲಿ ಮಾತ್ರ ಪರಿಷ್ಕೃತಗೊಳ್ಳಬೇಕಿರುತ್ತದೆ ಎಂಬ ಅಭಿಪ್ರಾಯವನ್ನು ನೀಡಿರುತ್ತಾರೆ.<br><br>ದಿನಾಂಕ: 29-12-2024 ರಂದು ನಡೆದ ಗೆಜೆಟೆಡ್ ಪ್ರೊಬೆಷನರ್ಸ್ ಪೂರ್ವಭಾವಿ ಮರುಪರೀಕ್ಷೆಯ ಎರಡೂ ಪತ್ರಿಕೆಗಳಲ್ಲಿನ ಪ್ರಶ್ನೆಗಳಲ್ಲಿ ಕನ್ನಡ ಭಾಷಾಂತರದಲ್ಲಿ ಲೋಪವಿರುವುದಾಗಿ ಕೆಲವು ಅಭ್ಯರ್ಥಿಗಳ ಮತ್ತು ಸಂಘ/ ಸಂಸ್ಥೆಗಳಿಂದ ಬಂದ ದೂರನ್ನು ಪರಿಶೀಲಿಸಲು ಪ್ರಶ್ನೆಗಳ ಭಾಷಾಂತರವನ್ನು ಮತ್ತು ಕೀ-ಉತ್ತರವನ್ನು ಪರಿಶೀಲಿಸುವ ಸಲುವಾಗಿ ಉತ್ತಮ ಕನ್ನಡ ಭಾಷಾ ಜ್ಞಾನವನ್ನು ಹೊಂದಿರುವ ಹಾಗೂ ಆಯಾ ವಿಷಯಗಳಲ್ಲಿ ಪರಿಣತಿ ಹೊಂದಿರುವಂತಹ ಮೂವರು ವಿಷಯ ತಜ್ಞರುಗಳನ್ನೊಳಗೊಂಡ 12 ವಿಷಯಗಳ ವಿಷಯ ತಜ್ಞರುಗಳ ಸಮಿತಿ ರಚಿಸಿ ಅಭಿಪ್ರಾಯವನ್ನು ಪಡೆಯಲಾಗಿದ್ದು, ಕೆಲವು ಪ್ರಶ್ನೆಗಳಲ್ಲಿ ಯಾವುದೇ ಭಾಷಾಂತರ ವ್ಯತ್ಯಾಸವಿರುವುದಿಲ್ಲವೆಂದು, ಕೆಲವು ಪ್ರಶ್ನೆಗಳಲ್ಲಿ ಕಾಗುಣಿತಾಕ್ಷರಗಳ ಮುದ್ರಣ ದೋಷವಾಗಿರುವುದಾಗಿಯೂ, ಕೆಲವು ಪ್ರಶ್ನೆಗಳಲ್ಲಿ ವ್ಯತ್ಯಾಸವಿದ್ದರೂ ಸಹ ಪ್ರಶ್ನೆಯನ್ನು ಅರ್ಥೈಸಿಕೊಂಡು ಕೀ-ಉತ್ತರವನ್ನು ಗುರುತಿಸಬಹುದಾಗಿದೆ ಎಂದು ಅಭಿಪ್ರಾಯಿಸಿದ್ದು, ಇದರಿಂದಾಗಿ ಹಾಗೂ ತಾಂತ್ರಿಕ ದೋಷದಿಂದ 5 ಪ್ರಶ್ನೆಗಳಿಗೆ ಕೃಪಾಂಕ ಹಾಗೂ 1 ಪ್ರಶ್ನೆಯ ಕೀ-ಉತ್ತರವನ್ನು ಪರಿಷ್ಕರಿಸಬೇಕೆಂದು ತಿಳಿಸಿರುತ್ತಾರೆ. ಸದರಿ ಸಮಿತಿಯ ಅಭಿಪ್ರಾಯದಂತೆ, ಅಂತಿಮ ಪರಿಷ್ಕೃತ ಕೀ-ಉತ್ತರಗಳನ್ನು ದಿನಾಂಕ:03-02-2025ರಂದು ಪ್ರಕಟಿಸಲಾಗಿರುತ್ತದೆ. |

| | | |
|---|---|---|
| ಆ | ಸಮಿತಿಯು ವರದಿ ನೀಡಿದ ನಂತರವೇ ಫಲಿತಾಂಶ ಪ್ರಕಟಿಸಲಾಗಿತ್ತೇ ಅಥವಾ ವರದಿ ನೀಡುವ ಮುನ್ನವೇ ಫಲಿತಾಂಶ ಪ್ರಕಟಿಸಲಾಗಿತ್ತೇ; | ಸಮಿತಿಯು ವರದಿ ನೀಡಿದ ನಂತರವೇ ಆಯೋಗ ಫಲಿತಾಂಶವನ್ನು ಪ್ರಕಟಿಸಿರುತ್ತದೆ. |
| ಇ | ಕೆ.ಪಿ.ಎಸ್.ಸಿಯಲ್ಲಿ ಈ ರೀತಿ ಸಮಸ್ಯೆಗಳು ಉಂಟಾಗಲು ಕಾರಣವೇನು; ಇದರ ಸುಧಾರಣೆಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ; | ಕರ್ನಾಟಕ ಲೋಕಸೇವಾ ಆಯೋಗವು ಜನವರಿ 2024 ರಿಂದ ಇಲ್ಲಿಯವರೆಗೆ 12 ಅಧಿಸೂಚನೆಗಳಲ್ಲಿ ಅಧಿಸೂಚಿಸಲಾದ ಒಟ್ಟು 1734 ಹುದ್ದೆಗಳಿಗೆ 37 ಪತ್ರಿಕೆಗಳಿಗೆ ಒಟ್ಟಾರೆ 11,40,292 ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಯಾವುದೇ ಲೋಪ ದೋಷಗಳಿಲ್ಲದೆ ಸುಲಲಿತವಾಗಿ ನಡೆಸಲಾಗಿರುತ್ತದೆ.<br><br>ಆಯೋಗವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಆಂಗ್ಲ ಮತ್ತು ಕನ್ನಡ ಎರಡೂ ಭಾಷೆಗಳಲ್ಲಿ ಪ್ರಶ್ನೆಗಳನ್ನು ಸಿದ್ಧಪಡಿಸಿ ಬಹುತೇಕ ವಿಷಯ ತಜ್ಞರುಗಳು ನೀಡಿರುತ್ತಾರೆ ಉಳಿದಂತೆ ಆಂಗ್ಲ ಭಾಷೆಯಲ್ಲಿರುವಂತಹ ಪ್ರಶ್ನೆಗಳನ್ನು ಕನ್ನಡಕ್ಕೆ ಭಾಷಾಂತರಿಸಲು ಭಾಷಾಂತರಕಾರರ ನೆರವನ್ನು ಪಡೆಯಲಾಗುತ್ತಿದ್ದು, ಪ್ರಶ್ನೆಗಳ ಗೋಪ್ಯತೆಯನ್ನು ಕಾಪಾಡುವ ದೃಷ್ಟಿಯಿಂದ ಆಯೋಗದಿಂದ ಪ್ರಶ್ನೆಗಳನ್ನು ಮತ್ತೊಮ್ಮೆ ಪರಿಶೀಲಿಸಲಾಗುವುದಿಲ್ಲ.<br><br>ದಿನಾಂಕ:23-01-2025ರಂದು ಮುಖ್ಯ ಕಾರ್ಯದರ್ಶಿಯವರು ಸಭೆಯನ್ನು ನಡೆಸಿ, ದಿನಾಂಕ:29-12-2024ರಂದು ನಡೆಸಿದ ಗೆಜೆಟೆಡ್ ಪ್ರೊಬೇಷನರ್ಸ್ ಪೂರ್ವಭಾವಿ ಮರುಪರೀಕ್ಷೆಯ ಪ್ರಶ್ನೆಪತ್ರಿಕೆಗಳಲ್ಲಿನ ಕನ್ನಡ ಭಾಷಾಂತರದಲ್ಲಿ ಉಂಟಾಗಿರುವ ದೋಷದ ಕುರಿತು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕರ್ನಾಟಕ ಲೋಕಸೇವಾ ಆಯೋಗಗಳ ಸಹಯೋಗದೊಂದಿಗೆ ಒಂದು ಕನ್ನಡ ಭಾಷಾ ತಜ್ಞರ ತಂಡವನ್ನು ರಚಿಸಲು ಪರಿಶೀಲಿಸಲಾಗುತ್ತಿದೆ |
| ಈ | ಈ ಬಗ್ಗೆ ತಪ್ಪಿತಸ್ಥರ ವಿರುದ್ಧ ತಿಸ್ತು ಕ್ರಮ ಕೈಗೊಳ್ಳಲಾಗಿದೆಯೇ? (ವಿವರ ಒದಗಿಸುವುದು) | ಅಭ್ಯರ್ಥಿಗಳಿಂದ ಮತ್ತು ಸಂಘ/ ಸಂಸ್ಥೆಗಳಿಂದ ಸ್ವೀಕೃತವಾದ ಮನವಿಗಳಿಗೆ ಸಂಬಂಧಿಸಿದಂತೆ ಉತ್ತಮ ಕನ್ನಡ ಭಾಷಾ ಜ್ಞಾನವನ್ನು ಹೊಂದಿರುವ ಹಾಗೂ ಆಯಾ ವಿಷಯಗಳಲ್ಲಿ ಪರಿಣತಿ ಹೊಂದಿರುವಂತಹ ಮೂವರು ವಿಷಯ ತಜ್ಞರುಗಳ ಸಮಿತಿಗಳನ್ನು ರಚಿಸಿ ಅಭಿಪ್ರಾಯವನ್ನು ಪಡೆಯಲಾಗಿದ್ದು, ಭಾಷಾಂತರ ಮತ್ತು ತಾಂತ್ರಿಕ ದೋಷದಿಂದಾಗಿ ಕೆಲವು ಪ್ರಶ್ನೆಗಳಿಗೆ ಕೃಪಾಂಕ ಹಾಗೂ ಕೆಲವು ಪ್ರಶ್ನೆಯ ಕೀ-ಉತ್ತರವನ್ನು ಪರಿಷ್ಕರಿಸಬೇಕೆಂದು, ಕೆಲವು ಪ್ರಶ್ನೆಗಳಲ್ಲಿ ವ್ಯತ್ಯಾಸವಿದ್ದರೂ ಸಹ ಪ್ರಶ್ನೆಯನ್ನು ಅರ್ಥೈಸಿಕೊಳ್ಳಬಹುದೆಂದು, ಕೆಲವು ಪ್ರಶ್ನೆಗಳಲ್ಲಿ ಕಾಗುಣಿತಾಕ್ಷರಗಳ ಮುದ್ರಣ ದೋಷವಾಗಿರುವುದಾಗಿಯೂ ಹಾಗೂ ಇನ್ನುಳಿದ ಪ್ರಶ್ನೆಗಳಲ್ಲಿ ಯಾವುದೇ ಭಾಷಾಂತರ ವ್ಯತ್ಯಾಸವಿರುವುದಿಲ್ಲವೆಂದು ಅಭಿಪ್ರಾಯ ನೀಡಿರುತ್ತಾರೆ |

**ಸಂಖ್ಯೆ: ಸಿಆಸುಇ 43 ಎಸ್‌ಎಲ್‌ಪಿ 2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ